ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1634**

ಸದಸ್ಯರ ಹೆಸರು : ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ಸಚಿವರು : ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು

ಉತ್ತರಿಸಬೇಕಾದ ದಿನಾಂಕ : 11-03-2022

ಕ್ರ. ಸಂ.	ಪ್ರಶ್ನೆ	ಉತ್ತರ
ಅ.	ಮಾನ್ಯ ರಾಜ್ಯಪಾಲರ ಭಾಷಣದಲ್ಲಿ ಬೆಂಗಳೂರು ಮತ್ತು ಇತರ ಪ್ರಮುಖ ನಗರಗಳಲ್ಲಿ ಸಾರ್ವಜನಿಕರು ಲಾಸ್ಟ್ ಮೈಲ್ ಕನೆಕ್ಟಿವಿಟಿಯನ್ನು ಒದಗಿಸಲು ಬೈಕ್ ಟ್ಯಾಕ್ಸಿ ಯೋಜನೆಯನ್ನು ಜಾರಿಗೊಳಿಸಿದೆ ಎಂದು ಹೇಳಿದ್ದು, ಈ ಸಂಬಂಧ ಸರ್ಕಾರ ಲಾಸ್ಟ್ ಮೈಲ್ ಕನೆಕ್ಟಿವಿಟಿಯನ್ನು ಒದಗಿಸಲು ಅಥವಾ ಬೈಕ್ ಟ್ಯಾಕ್ಸಿ ಯೋಜನೆಗೆ ಯಾವ ಕ್ರಮ ಜರುಗಿಸಿದೆ.	ಸಾರ್ವಜನಿಕ ಸಾರಿಗೆಗಾಗಿ ಮೊದಲ ಮತ್ತು ಕೊನೆಯ ಹಂತದ ಸಾರಿಗೆ ಸಂಪರ್ಕವನ್ನು ಕಲ್ಪಿಸುವ ಮತ್ತು ಸ್ವಯಂ-ಉದ್ಯೋಗ ಅವಕಾಶವನ್ನು ಒದಗಿಸುವ ಉದ್ದೇಶದಿಂದ, ಕರ್ನಾಟಕ ಸರ್ಕಾರವು ವಿದ್ಯುತ್ ಬೈಕ್ ಟ್ಯಾಕ್ಸಿ ಮತ್ತು ಅದಕ್ಕೆ ಸಂಬಂಧಿಸಿದ ವಿಷಯಗಳನ್ನು ನಿಯಂತ್ರಿಸುವುದಕ್ಕಾಗಿ ಕರ್ನಾಟಕ ವಿದ್ಯುತ್ ಬೈಕ್ ಟ್ಯಾಕ್ಸಿ ಯೋಜನೆ 2021 ಅನ್ನು ದಿನಾಂಕ: 14-07-2021 ರಿಂದ ಜಾರಿಗೆ ತರಲಾಗಿದೆ. ಈ ಸಂಬಂಧ ಕರ್ನಾಟಕ ವಿದ್ಯುತ್ ಬೈಕ್ ಟ್ಯಾಕ್ಸಿ ಯೋಜನೆ 2021 ರಡಿಯಲ್ಲಿ ಲೈಸೆನ್ಸ್ ಬಯಸಿ ಅರ್ಜಿ ಸಲ್ಲಿಸುವ ಸಂಸ್ಥೆಗಳಿಗೆ ಇಲಾಖೆಯು ಲೈಸೆನ್ಸ್ ನೀಡುವ ಕ್ರಮ ಜಾರಿಯಲ್ಲಿರುತ್ತದೆ.
ಆ.	2 Wheeler (ದ್ವಿಚಕ್ರ) ವಾಹನವನ್ನು White Board ವಾಹನವನ್ನು ಕಮರ್ಷಿಯಲ್ ಆಗಿ ಬಳಕೆ ಮಾಡಲು ಸರ್ಕಾರದ ನಿಲುವೇನು?	ಸಾರಿಗೇತರ ವರ್ಗದ (White Board) ದ್ವಿಚಕ್ರ ವಾಹನಗಳನ್ನು ಸಾರಿಗೆ ವಾಹನಗಳಾಗಿ (ಕಮರ್ಷಿಯಲ್) ಆಗಿ ಬಳಕೆ ಮಾಡಲು ಕಾನೂನಿನಲ್ಲಿ ಅವಕಾಶವಿರುವುದಿಲ್ಲ.

ಟಿಡಿ 33 ಟಿಡಿಕ್ಯೂ 2022

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ
ಪಂಗಡಗಳ ಕಲ್ಯಾಣ ಸಚಿವರು.